## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ನೂತನವಾಗಿ ನಿರ್ಮಿಸಿದ **"ಸಭಾ ಭವನದ ಕಟ್ಟಡಕ್ಕೆ"** ಅಂದಿನ ಜಿಲ್ಲಾ ಉಸ್ತುವಾರಿ ಸಚಿವರಾದ **ಶ್ರೀ ಸಿ.ಎಂ.ಉದಾಸಿ ಸಭಾ ಭವನವೆಂದು** ನಾಮಕರಣ ಮಾಡುವ ವಿಷಯಕ್ಕೆ ಸಂಬಂಧಿಸಿದಂತೆ ಹಾವೇರಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ತೆಗೆದುಕೊಂಡಿರುವ ನಿರ್ಣಯವನ್ನು ರದ್ದುಗೊಳಿಸುವ ಬಗ್ಗೆ.

**ಓದಲಾಗಿದೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರ ಪತ್ರ ಸಂಖ್ಯೆ: ಸಂಖ್ಯೆ: ಹಾಜಿಪಂ/ಪರಿಷತ್ ವಿಭಾಗ-1/ವಹಿ- /2018-19/ 2383, ದಿನಾಂಕ: 29-09-2018.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರು ಸರ್ಕಾರಕ್ಕೆ ಪತ್ರ ಬರೆದು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ಶ್ರೀ. ಏಕನಾಥ ಮುದಿಗೌಡರ್ ಸಾಕಿನ್ ರಾಣೇಬೆನ್ನೂರು ಇವರು ದಾಖಲಿಸಿರುವ ಸಾರ್ವಜನಿಕ ಹಿತಾಸಕ್ತಿ ರಿಟ್ ಪಿಟಿಷನ್ ಸಂಖ್ಯೆ:50419/2017 ರಲ್ಲಿ ದಿನಾಂಕ:21-07-2012 ರಂದು ಹಾವೇರಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಜಿಲ್ಲಾ ಆಡಳಿತ ಭವನದಲ್ಲಿ ನೂತನವಾಗಿ ನಿರ್ಮಿಸಿದ "ಸಭಾ ಭವನದ ಕಟ್ಟಡಕ್ಕೆ" ಅಂದಿನ ಜಿಲ್ಲಾ ಉಸ್ತುವಾರಿ ಸಚಿವರಾದ **"ಶ್ರೀ. ಸಿ.ಎಂ ಉದಾಸಿ ಸಭಾಭವನ ಎಂದು ನಾಮಕರಣ ಮಾಡಲು"** ಕೈಗೊಂಡಿರುವ ಸರ್ವಾನುಮತದ ನಿರ್ಣಯವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮಗಳಿಗೆ ವ್ಯತಿರಿಕ್ತವಾಗಿ ನಿರ್ಣಯ ಕೈಗೊಂಡಿರುವುದನ್ನು ರದ್ದುಪಡಿಸುವಂತೆ ಮನವಿಯಲ್ಲಿ ಕೋರಿರುತ್ತಾರೆ.

ದಿನಾಂಕ:21-07-2012 ರಂದು ಹಾವೇರಿ ಜಿಲ್ಲಾ ಪಂಚಾಯಿತಿಯಿಂದ ಸರ್ವಾನುಮತದಿಂದ ಕೈಗೊಂಡಿರುವ ನಿರ್ಣಯವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ನಿಯಮಗಳಿಗೆ ವ್ಯತಿರಿಕ್ತವಾಗಿರುತ್ತದೆ. ಆದುದರಿಂದ, ಮಾನ್ಯ ನ್ಯಾಯಾಲಯಕ್ಕೆ ಪ್ರತಿ ರಕ್ಷಣಾ ಹೇಳಿಕೆ ದಾಖಲಿಸುವ ಬಗ್ಗೆ ಮುಂಬರುವ ಸಾಮಾನ್ಯ ಸಭೆಯಲ್ಲಿ ಮಂಡಿಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಹಾವೇರಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ದಿನಾಂಕ:21-07-2012 ರಂದು ಕೈಗೊಂಡಿರುವ ನಿರ್ಣಯವನ್ನು ರದ್ದುಪಡಿಸಿ, ಸೂಕ್ತ ಆದೇಶ ಹೊರಡಿಸಬೇಕೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ರವರು ಕೋರಿರುತ್ತಾರೆ.

ಸದರಿ ಪ್ರಕರಣವನ್ನು ಕೂಲಂಕಷವಾಗಿ ನಿಯಮಾನುಸಾರ ಪರಿಶೀಲಿಸಿದ್ದು, ಸರ್ಕಾರಿ ಕಟ್ಟಡಗಳಿಗೆ ಚುನಾಯಿತ ಪ್ರತಿನಿಧಿಗಳ ಹೆಸರನ್ನು ನಾಮಕರಣ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಅಡಿಯಲ್ಲಿ ಅವಕಾಶವಿಲ್ಲದಿರುವುದನ್ನು ಪರಿಗಣಿಸಿ, ಹಾವೇರಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ದಿನಾಂಕ: 21-07-2012 ರಂದು ಕೈಗೊಂಡಿರುವ ನಿರ್ಣಯವನ್ನು ರದ್ದುಪಡಿಸಲು ಸರ್ಕಾರವು ತೀರ್ಮಾನಿಸಿದ್ದು, ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 402 ಜಿಪಸ 2018, ಬೆಂಗಳೂರು, ದಿನಾಂಕ:03-12-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನೂತನವಾಗಿ ನಿರ್ಮಿಸಿದ **"ಸಭಾ ಭವನದ ಕಟ್ಟಡಕ್ಕೆ"** ಅಂದಿನ ಜಿಲ್ಲಾ ಉಸ್ತುವಾರಿ ಸಚಿವರಾದ **ಶ್ರೀ ಸಿ.ಎಂ.ಉದಾಸಿ ಸಭಾ ಭವನವೆಂದು ನಾಮಕರಣ ಮಾಡುವ** ವಿಷಯಕ್ಕೆ ಸಂಬಂಧಿಸಿದಂತೆ, ಹಾವೇರಿ ಜಿಲ್ಲಾ ಪಂಚಾಯಿತಿಯು ದಿನಾಂಕ:21-07-2017 ರ ಸಾಮಾನ್ಯ ಸಭೆಯಲ್ಲಿ ಕೈಗೊಂಡಿರುವ ನಿರ್ಣಯಕ್ಕೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರಲ್ಲಿ ಅವಕಾಶವಿಲ್ಲದಿರುವುದನ್ನು ಹಾಗೂ ಕಾನೂನಿಗೆ ಅಸಂಗತವಾಗಿರುವುದನ್ನು ಪರಿಗಣಿಸಿ, ಸದರಿ ನಿರ್ಣಯವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಲು ಕೋರಿದೆ.

ಇವರಿಗೆ:

1) ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಹಾವೇರಿ.
2) ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
4) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ ಇವರ ಮಾಹಿತಿಗಾಗಿ ಹಾಗೂ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರುವಂತೆ ಕೋರಿದೆ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಮುಖ್ಯಸ್ಥರು, ಗಣಕಕೋಶ, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಸದರಿ ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
7) ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.